(iv) ಪರ್ಯಾಲೋಚನಾ ಪ್ರಸ್ತಾವ

(ಅ) 2001ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) ಎರಡನೆ ತಿದ್ದುಪಡಿ ವಿಧೇಯಕ

ಶ್ರೀ ಆರ್.ಬಿ. ತಿಮ್ಮಾಪುರ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೆ, "2001ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವ ಮಂಡಿಸಲ್ಪಟ್ಟಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ; "2001ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ-2

ಅಧ್ಯಕ್ಷರು : "ಖಂಡ 2 ವಿಧೇಯಕ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ-2 ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, " ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಆರ್.ಬಿ. ತಿಮ್ಮಾಪುರ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೆ, "2001ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, " 2001ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ (ನಿಯಂತ್ರಣ) (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.